ಗುರುವಾರ 07.08.2025 ಬೆಂಗಳೂರು ಗ್ರಾಮಾಂತರ ಬೆಲೆ: 5ರೂ, 2 ಪುಟಗಳು ಸಂಪುಟ 01 - ಸಂಚಿಕೆ 18 Digital Varthe Kannada Daily Volume 01 - Issue 18 Thursday 07.08.2025 Price: 5/- Rs 2 Pages Bangalore Rural

# ಡಿಜಿಟಲ್ ವಾರ್ತೆ

DIGITAL VARTHE

www.digitalvarthe.com

RNI: KNKAN/25/A1348 ಕನ್ನಡಿಗರ ಶಕ್ತಿ ಕನ್ನಡ ದಿನಪತ್ರಿಕೆ

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು

ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು

digitalvarthe@gmail.com

# ಜನರೊಂದಿಗೆ ಜನತಾದಳದಲ್ಲಿ ವೃಷಭಾವತಿ ಗದ್ದಲ

## ಮಿಸ್ಡ್ ಕಾಲ್ ಅಭಿಯಾನದಲ್ಲಿ ಶಾಸಕರ ಮೇಲೆ ಆರೋಪಗಳ ಸುರಿಮಳೆ | ಯಶಸ್ವಿಯಾದ ಬೈಕ್ ರ್ಯಾಲಿ

ನೆಲಮಂಗಲ: ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿಯವರ ನೇತೃತ್ವದಲ್ಲಿ ಇಂದು ನೆಲಮಂಗಲದಲ್ಲಿ 'ಜನರೊಂದಿಗೆ ಜನತಾದಳ' ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು, ಸಾವಿರಾರು ಜನ, ಕಾರ್ಯಕರ್ತರು ಮತ್ತು ಯುವಕರು ಪಾಲ್ಗೊಂಡಿದ್ದ ಈ ಕಾರ್ಯಕ್ರಮವು ರಾಜಕೀಯ ಉತ್ಸಾಹಕ್ಕೆ ನೂತನ ಚೈತನ್ಯ ತುಂಬಿದೆ.

ಎಂವಿಎಂ ಕಲ್ಯಾಣ ಮಂಟಪದಲ್ಲಿ ನಡೆದ ಸಾರ್ವಜನಿಕ ಸಭೆಯಲ್ಲಿ ಜೆಡಿಎಸ್ ಮಿಸ್ಡ್ ಕಾಲ್ ಅಭಿಯಾನ ನಡೆದಿದ್ದು ಸಾವಿರಾರು ಕಾರ್ಯಕರ್ತರು ನೋಂದಣಿಯಾಗಬೇಕು ಇಂದು ನಿಖಿಲ್ ಕರೆ ನೀಡಿದರು.

ಇನ್ನು ಕಾರ್ಯಕ್ರಮದ ಉದ್ದಕ್ಕೂ ಮೂಲ ಉದ್ದೇಶಗಳನ್ನ ಮರೆತು ನೆಲಮಂಗಲ ಕ್ಷೇತ್ರದ ಆಡಳಿತದ ಬಗ್ಗೆ ತೆಗೆಳಲು ವೇದಿಕೆ ಬಳಕೆಯಾಗಿದ್ದು, ಎಲ್ಲಾ ಭಾಷಣಕಾರರು ಮಾತಿನುದ್ದಕ್ಕೂ ತಾಲೂಕಿನ ಆಡಳಿತ ವೈಖರಿಯಲ್ಲಿ ಸಾಕಷ್ಟು ಲೋಪ ದೋಷಗಳಿಗೆ ಎಂದು ಸಾಲು ಸಾಲು ಆರೋಪ ಮಾಡಿದರು.



ಜನರೊಂದಿಗೆ ಜನತಾದಳ ಕಾರ್ಯಕ್ರಮದ ವೇದಿಕೆ ಕಾರ್ಯಕ್ರಮವನ್ನ ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟನೆ

**ನೂತನ ಪದಾಧಿಕಾರಿಗಳ ಆಯ್ಕೆ:** ಜೆಡಿಎಸ್ ಪಕ್ಷದ ಸಂಘಟನಾ ಉದ್ದೇಶದಿಂದ ಮೂರು ಘಟಕಗಳಿಗೆ ನೂತನ ಪದಾಧಿಕಾರಿಗಳನ್ನ ಆಯ್ಕೆ ಮಾಡಲಾಗಿದ್ದು, ನೂತನವಾಗಿ ಆಯ್ಕೆಯಾದ ಪದಾಧಿಕಾರಿಗಳಿಗೆ ಮಾಜಿ ಶಾಸಕ ಶ್ರೀನಿವಾಸಮೂರ್ತಿ, ತಾಲೂಕು ಅಧ್ಯಕ್ಷ ತಿಮ್ಮರಾಯಪ್ಪ ಹಾಗೂ ನಿಖಿಲ್ ಕುಮಾರಸ್ವಾಮಿ ನೇಮಕಾತಿ ಪತ್ರಗಳನ್ನ ವಿತರಣೆ ಮಾಡಿದರು. ನೆಲಮಂಗಲ ಟೌನ್ ಅಧ್ಯಕ್ಷರಾಗಿ ವಿಷ್ಣು ಕೆಆರ್, ತಾಲೂಕು ವಕ್ತಾರರಾಗಿ ಕನಕರಾಜು ಜಿಎನ್ ಮತ್ತು ವಿದ್ಯಾರ್ಥಿ ಘಟಕದ ಅಧ್ಯಕ್ಷರಾಗಿ ಬಾಲ ಆದಿತ್ಯ.ಸಿ ನೇಮಕಗೊಂಡರು.

**ಬೈಕ್ ರ್ಯಾಲಿ ಯಶಸ್ವಿ :** ಕಾರ್ಯಕ್ರಮದ ಅಂಗವಾಗಿ ನಗರದ ಪ್ರಸಿದ್ಧ ಚೌಡೇಶ್ವರಿ ದೇವಾಲಯದಿಂದ ಬಸ್ ನಿಲ್ದಾಣ - ಸೊಂಡೆಕೊಪ್ಪ ರಸ್ತೆ ಮಾರ್ಗವಾಗಿ ಬೃಹತ್ ಬೈಕ್ ರ್ಯಾಲಿ ನಡೆದಿದ್ದು, ಜೆಡಿಎಸ್ ತಾಲೂಕು ಯುವ ಘಟಕದ ಅಧ್ಯಕ್ಷ ಮತ್ತು ನಗರಸಭಾ ಸದಸ್ಯ ಅಂಜನಮೂರ್ತಿ ನೇತೃತ್ವದಲ್ಲಿ, ಸಾವಿರಕ್ಕೂ ಅಧಿಕ ಬೈಕ್‌ಗಳು ಪಾಲ್ಗೊಮಾಡಿದ್ದವು.





ನೂತನ ಪದಾಧಿಕಾರಿಗಳಿಗೆ ನೇಮಕಾತಿ ಪತ್ರ ವಿತರಣೆ ಮಾಡಲಾಯಿತು.

### ಪೊಲೀಸರನ್ನ ಇಟ್ಕೊಂಡು ಕೆಲಸ ಮಾಡಿಸುತ್ತಿದ್ದಾರೆ

ಹಾಲಿ ಶಾಸಕರು ವೃಷಭಾವತಿ ಯೋಜನೆ ತಂದೆ ತರುತ್ತೇವೆ ಎಂದು ಹೇಳಿ ಪೊಲೀಸರನ್ನ ಇಟ್ಟುಕೊಂಡು ಕೆಲ್ಸಸ ಮಾಡಿಸುತ್ತಿದ್ದಾರೆ, ನಾವು ನಿರಂತರವಾಗಿ ಈ ವಿಚಾರದಲ್ಲಿ ವಿರೋಧ ವ್ಯಕ್ತ ಪಡಿಸುತ್ತಿದ್ದೇವೆ. ಮುಂದಿನ ದಿನಗಳಲ್ಲಿ ಮತ್ತೊಂದು ಬೃಹತ್ ಹೋರಾಟ ನಡೆಸಲಿದ್ದು ಆ ಹೋರಾಟಕ್ಕೆ ನಿಖಿಲ್ ಕುಮಾರಸ್ವಾಮಿ ಕೈಜೋಡಿಸಬೇಕು.

**-ಈ, ಕೃಷ್ಣಪ್ಪ, ಮಾಜಿ ಪರಿಷತ್ ಸದಸ್ಯ**

### ಕೇವಲ ರಸ್ತೆಗೆ ಡಾಂಬರು ಹಾಕುವುದು ಅಭಿವೃದ್ಧಿಯಲ್ಲ

ಶಾಸಕರ ಅಧಿಕಾರಿಗಳಿಗೆ ಕೆಳಗಿನ ಮಾತು ಆಡ್ತಾರೆ ಅನ್ನೋದು ಎಲ್ಲರಿಗೂ ಗೊತ್ತಿದೆ, ನಿಮಗೆ ಅಧಿಕಾರ ಅವಕಾಶ ಕೊಟ್ಟಿದ್ದು ಅಭಿವೃದ್ಧಿ ಮಾಡೋಕೆ ಜನರ ಸೇವೆ ಮಾಡೋಕೆ. ನೆಲಮಂಗಲ ಕೆರೆಯ ವಿಚಾರವನ್ನ ಈಗಾಗಲೇ ಸಾಮಾಜಿಕ ಜಾಲತಾಣಗಳಲ್ಲಿ ಬಹುದೊಡ್ಡ ಚರ್ಚೆ ಆಹುತ್ತಿದೆ, ನನ್ನ ಅಧಿಕಾರ ಅವಧಿಯಲ್ಲಿ ಕೊಟ್ಟ 6 ಕೋಟಿ ಹಣ ಏನಾಯ್ತು, ರಾಜಕಾಲಿವೆ ಅಭಿವೃದ್ಧಿ ೫ ಕೋಟಿ ಏನಾಯ್ತು. ಅಭಿವೃದ್ಧಿ ಎಂದರೆ ಕೇವಲ ರಸ್ತೆಗಳಾಗೆ ಡಾಂಬರು ಹಾಕೋದಲ್ಲ ಪ್ರತಿ ಗಲ್ಲಿ ಗಲ್ಲಿಯಲ್ಲಿ ಸರ್ವತೋಮುಖ ಅಭಿವೃದ್ಧಿ ಮಾಡಬೇಕು.

**-ಡಾ. ಕೆ ಶ್ರೀನಿವಾಸಮೂರ್ತಿ, ಮಾಜಿ ಶಾಸಕ**





### ನಿಮ್ಮ ಜೇಬು ಭರ್ತಿ ಮಾಡೋಕೆ ವೃಷಭಾವತಿ

ನನಗೆ ಇರುವ ಜ್ಞಾನದ ಪ್ರಕಾರ ಚರಂಡಿ ನೀರನ್ನ ಮೂರನೇ ಹಂತದ ಶುದ್ಧೀಕರಣ ಮಾಡುವ ವ್ಯವಸ್ಥೆ ಬಹುಶಃ ನಾವು ವಿಶ್ವದಲ್ಲೇ ಕಂಡಿಲ್ಲ, 1800 ಕೋಟಿ ಪೈಪ್ಲೈನ್ ನಲ್ಲಿ ದಾಖಲೆ ಮಟ್ಟದ ಪರ್ಸಂಟೇಜ್ ತಗೊಳೋಕೆ ಮುಂದಾಗಿದ್ದಾರೆ. ನಿಮ್ಮ ಜೇಬು ಭರ್ತಿ ಮಾಡೋಕೆ ಬೆಂಗಳೂರಿನ ತ್ಯಾಜ್ಯ ಕೊಳಚೆ ನೀರನ್ನ ಕೆರೆಗಳಿಗೆ ತುಂಬಿಸೋಕೆ ಹೊರಟಿದ್ದೀರಾ. ನಿಮಗೆ ಕಿಂಚಿತ್ತು ಕಾಳಜಿ ಇಲ್ಲ ಜನರ ಮೇಲೆ. ಮುಂದಿನ ದಿನ ದೇವೇಗೌಡ ಅಪ್ಪಾಜಿ, ಕುಮಾರಣ್ಣ ಸಹ ಈ ಹೋರಾಟಕ್ಕೆ ದೊಡ್ಡಮಟ್ಟದಲ್ಲಿ ಕೈಜೋಡಿಸಲಿದ್ದಾರೆ.

**- ನಿಖಿಲ್ ಕುಮಾರಸ್ವಾಮಿ, ಯುವ ಘಟಕದ ರಾಜ್ಯಾಧ್ಯಕ್ಷ**

### ಬೆಂಗಳೂರಿಗರು ಬಳಸಿ ಬಿಸಾಡುವ ತ್ಯಾಜ್ಯ ವೃಷಭಾವತಿಗೆ ಬರುತ್ತೆ

ಮಾಜಿ ಶಾಸಕ ಶ್ರೀನಿವಾಸಮೂರ್ತಿ ಬಸವ ಇದ್ದಂಗೆ ಇದ್ರೂ, ಚುನಾವಣೆ ವೇಳೆ ಜನ ಬದಲಾವಣೆ ಬಯಸಿದ್ದರು. ಆದರೆ ಇಂದು ಕೈ ಇಸುಕಿಕೊಳ್ಳುತ್ತಿದ್ದಾರೆ, ಕಾಂಗ್ರೆಸ್ ಪಕ್ಷದ ನಾಯಕರು ಇಂದು ತಮ್ಮ ಶಾಸಕರನ್ನ ಬೈಕೊಂಡು ಹೋದಾಡುತ್ತಿದ್ದಾರೆ, ನಾವ್ಯಾರು ಕೂಡ ಗುತ್ತಿಗೆ ಕೆಲಸ ಮಾಡಿಲ್ಲ ಸುಳ್ಳು ಹೇಳಿಲ್ಲ, ಯಾವುದೇ ಆಸ್ತಿಯನ್ನ ಹೊಡೆಯುವ ಕೆಲಸ ಮಾಡಿಲ್ಲ. ಈ ಹಿಂದೆ ಕ್ಷೇತ್ರದಲ್ಲಿ ಇದ್ದ ಯಾವುದೇ ಶಾಸಕರಲ್ಲಿ ನಾವು ಇಷ್ಟು ದುರಹಂಕಾರವನ್ನ ಎಂದು ನೋಡಿಲ್ಲ ಎಂದು ಕಾಂಗ್ರೆಸ್ ನಾಯಕರೇ ಮಾತನಾಡುತ್ತಿದ್ದಾರೆ.

ಪೊಲೀಸರನ ಅಡ್ಡ ಇಟ್ಟುಕೊಂಡು ನಮ್ಮ ನಾಯಕರನ್ನ ಕುಗ್ಗಿಸಲು ನಿಮ್ಮಿಂದ ಆಗುವುದಿಲ್ಲ. ಬೆಂಗಳೂರಿನಲ್ಲಿ ಬಳಸಿ ಬಿಸಾಕುವ ಎಲ್ಲಾ ತ್ಯಾಜ್ಯ ನಮ್ಮ ಭೈರಮಂಗಲ ಕೆರೆಗೆ ಬರುತ್ತೆ, ಕಾನೂನಿನ ಪ್ರಕಾರ ಮೂರು ಹಂತದ ಶುದ್ದೀಕರಣ ಮಾಡಿಸಬೇಕು ಆದ್ರೆ ಯಾವುದೇ ಮಾಡದೇ ನೀರನ್ನ ತಂದು ಕೆರೆಗಳಿಗೆ ತುಂಬಿಸೋಕೆ ಹೋಗಿದ್ದೀರಾ? ಇದೇನಾ ನಿಮ್ಮ ಸಾಧನೆ?

**-ಮಂಜುನಾಥ್ , ಮಾಜಿ ಶಾಸಕ**



ನೆಲಮಂಗಲದ ರಾಜ ಬೀದಿಗಳಲ್ಲಿ ಮೆರವಣಿಗೆ ವೇರೆ ಬೃಹತ್ ಗುಲಾಬಿ ಹೂವಿನ ಹಾರದ ಮೂಲಕ ಸ್ವಾಗತಿಸಲಾಯಿತು



ಒಮ್ಮೆಯೂ ಶಾಸಕರಾಗದ, ಯಾವುದೇ ಚುನಾಯಿತ ಸದಸ್ಯರಾಗದ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷರಾದ ನಿಖಿಲ್ ಮುಂದೆ ಕೈಕಟ್ಟಿ ನಿಂತುಕೊಳ್ಳುವ ಅವಶ್ಯಕತೆ ಮಾಜಿ ಶಾಸಕರಿಗೂ ಹಾಗೂ ಬಮೂಲ್ ನಿರ್ದೇಶಕರಿಗೂ ಇರಲಿಲ್ಲ. ಕೆಲವ ಕುಮಾರಸ್ವಾಮಿ ಮಗ ಎನ್ನುವ ಕಾರಣಕ್ಕೆ ಈ ರೀತು ನಿಲ್ಲುವುದು ಎಷ್ಟು ಸರಿ ಎಂದು ರಾಜಕೀಯ ವಲಯಗಳಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಇಂದು ತಹಸೀಲ್ದಾರ್ ವಿರುದ್ಧ ಪ್ರತಿಭಟನೆ



ನೆಲಮಂಗಲ: ದಲಿತ ಸಂಘಟನೆಯ ಮುಖಂಡರು ತಹಶಿಲ್ದಾರರನ್ನು ಭೇಟಿ ಮಾಡಲು ತೆರಳಿದ್ದಾಗ ಅವರ ಅಹವಾಲನ್ನು ಕೇಳದೇ ಅರ್ದ ಗಂಟೆ ಬಾಗಿಲಲ್ಲಿಯೇ ನಿಲ್ಲಿಸಿ, ಅವಮಾನ ಮಾಡಿ ಏಕಾಏಕಿ ಹೊರಗಡೆಗೆ ಹೋಗಿರುತ್ತಾರೆ. ದಲಿತ ಮುಖಂಡರುಗಳಿಗೆ ಅವಮಾನ ಮಾಡಿರುತ್ತಾರೆ ಎಂದು ಇಂದು ಪ್ರತಿಭಟಿಸಲು ಬೆಳಿಗ್ಗೆ 11 ಗಂಟೆಗೆ ತಾಲ್ಲೂಕು ಕಚೇರಿ ಮುಂಭಾಗ ಪ್ರತಿಭಟನೆ ನಡೆಸಲು ಕರೆ ನೀಡಿದ್ದಾರೆ.

# ಧರ್ಮಾಧಿಕಾರಿಯ ಸರ್ವಾಧಿಕಾರಕ್ಕೆ ಅಂತಿಮ ಮೊಳೆ – ಕೆ.ಎಲ್. ಅಶೋಕ್ ಎಚ್ಚರಿಕೆ

ಬೆಂಗಳೂರು: ಧರ್ಮಸ್ಥಳದಲ್ಲಿ ಯೂಟ್ಯೂಬರ್‌ಗಳ ಮೇಲೆ ನಡೆದ ಹೇಯ ಕೃತ್ಯವನ್ನು ಎದ್ದೇಳು ಕರ್ನಾಟಕದ ಮುಖ್ಯಸ್ಥ ಕೆ. ಎಲ್. ಅಶೋಕ್ ತೀವ್ರವಾಗಿ ಖಂಡಿಸಿದ್ದಾರೆ. ಈ ಘಟನೆಯು ಕೇವಲ ಒಂದು ಅಪರಾಧವಲ್ಲ, ಬದಲಾಗಿ ಧರ್ಮಸ್ಥಳದ ಧರ್ಮಾಧಿಕಾರಿಯ ಸರ್ವಾಧಿಕಾರಕ್ಕೆ ಅಂತಿಮ ಮೊಳೆ ಹೊಡೆಯುವ ಸಮಯ ಎಂದು ಅವರು ಪ್ರಖರ ಎಚ್ಚರಿಕೆ ನೀಡಿದ್ದಾರೆ. ಈ ಘಟನೆಯನ್ನು ತೀವ್ರವಾಗಿ ವಿರೋಧಿಸುವುದಾಗಿ ತಿಳಿಸಿರುವ ಅಶೋಕ್, ಇದು ನಾಡಿನ ಎಲ್ಲ ಹೋರಾಟಗಾರರನ್ನೂ ಆಕ್ರೋಶಕ್ಕೆ ತಳ್ಳಿದೆ ಎಂದು ಹೇಳಿದ್ದಾರೆ.

ಈ ಘಟನೆಯ ಕುರಿತು ಮಾತನಾಡಿರುವ ಅಶೋಕ್, ಈ ಹಲ್ಲೆಗೆ ಸಂಬಂಧಿಸಿದಂತೆ ನಾಡಿನ ಯಾವುದೇ ಹೋರಾಟಗಾರರು ಸುಮ್ಮನೆ ಕೂರುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ದಾಳಿಕೋರರು ಮತ್ತು ಈ ದಾಳಿಯ ಹಿಂದೆ ಇರುವವರು ತೀವ್ರ ಬೆಲೆ ತೆರಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ. ಈ ಘಟನೆಯ ಅಂತಿಮ ಫಲಿತಾಂಶ ನಾಳೆ ಹೊರಬರಲಿದೆ ಎಂದು ಅವರು ತಿಳಿಸಿದ್ದಾರೆ. ಈ ಗೂಂಡಾ ವರ್ತನೆಯು ಧರ್ಮಸ್ಥಳದಲ್ಲಿನ ವ್ಯವಸ್ಥೆಯ ಬಗ್ಗೆ ಗಂಭೀರ ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಅಶೋಕ್ ಅವರ ಹೇಳಿಕೆಯು ರಾಜ್ಯದಲ್ಲಿ ವ್ಯಾಪಕ ಚರ್ಚೆಗೆ ಕಾರಣವಾಗಿದೆ.


## ಅಭಿವ್ಯಕ್ತಿ ಸ್ವಾತಂತ್ರ್ಯದ ಮೇಲೆ ದಾಳಿ

ಧರ್ಮಸ್ಥಳದ ಡಿ ಗ್ಯಾಂಗ್ ನಡೆಸಿರುವ ಮಾಧ್ಯಮದ ಮೇಲಿನ ದಾಳಿ ಕರ್ನಾಟಕದಲ್ಲಿ ಪತ್ರಿಕಾ ಸ್ವಾತಂತ್ರ್ಯ ಮತ್ತು ಅಭಿವ್ಯಕ್ತಿ ಸ್ವಾತಂತ್ರ್ಯದ ಮೇಲೆ ದಾಳಿಯಾಗಿದೆ, ಈ ಘಟನೆಯ ಹಿಂದೆ ಯಾರಿದ್ದಾರೆ ಎಂಬುದನ್ನ ಪರಿಶೀಲಿಸಿ ತಪ್ಪಿತಸ್ಥರ ವಿರುದ್ಧ ತಕ್ಷಣ ಕಠಿಣಕ್ರಮ ತೆಗೆದುಕೊಳ್ಳುವಂತೆ ಸರ್ಕಾರವನ್ನು ನಾವೆಲ್ಲರೂ ಒತ್ತಾಯಿಸಬೇಕಾಗಿದೆ. ಎಂದು ನಟ ನಿರ್ದೇಶಕ ಹಾಗೂ ಸಾಮಾಜಿಕ ಹೋರಾಟಗಾರ ಟೈಗರ್ ನಾಗ್ ಆಗ್ರಹಿಸಿದ್ದಾರೆ

# ಧರ್ಮಸ್ಥಳದಲ್ಲಿ ನಾಲ್ವರು ಯೂಟ್ಯೂಬರ್‌ಗಳ ಮೇಲೆ ಹಲ್ಲೆ







ಧರ್ಮಸ್ಥಳ: ಧರ್ಮಸ್ಥಳದ ಸೌಜನ್ಯ ಮನೆಯ ಸಮೀಪ ಬಿಗ್‌ಬಾಸ್‌ನ ರಜತ್ ಎಂಬುವವರ ಸಂದರ್ಶನ ಮಾಡುತ್ತಿದ್ದ ನಾಲ್ಕು ಮಂದಿ ಯೂಟ್ಯೂಬ್ ಮಾಧ್ಯಮದವರ ಮೇಲೆ ಸುಮಾರು 60-70 ಜನರಿದ್ದ ಧರ್ಮಸ್ಥಳದ ಕೆಲವು ಗೂಂಡಾಗಳು ದಾಳಿ ಮಾಡಿ, ಮಾರಣಾಂತಿಕ ಹಲ್ಲೆ ನಡೆಸಿರುವ ಘಟನೆ ಬುಧವಾರ ಸಂಜೆ ವರದಿಯಾಗಿದೆ.

ಧರ್ಮಸ್ಥಳದ ಸಮೀಪದ ಸೌಜನ್ಯ ಅವರ ಮನೆಯ ಬಳಿ ಸಂದರ್ಶನ ನಡೆಸುತ್ತಿದ್ದ ನಾಲ್ವರು ಯೂಟ್ಯೂಬರ್‌ಗಳ ಮೇಲೆ ಮಾರಣಾಂತಿಕ ಹಲ್ಲೆ ನಡೆದಿದೆ.ಈ ಘಟನೆಯಲ್ಲಿ ಹಲವರು ಗಾಯಗೊಂಡಿದ್ದು, ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.

ಈ ದಾಳಿಗೆ ಒಳಗಾದವರು ಕುಡ್ಲ ರ್ಯಾಂಪೇಜ್ ಯೂಟ್ಯೂಬ್ ಚಾನೆಲ್‌ನ ಅಜಯ್ ಅಂಚನ್, ಯುನೈಟೆಡ್ ಮೀಡಿಯಾದ ಅಭಿಷೇಕ್, ಸಂಚಾರಿ ಸ್ಟುಡಿಯೋದ ವಿಜಯ್ ಮತ್ತು ಕುಡ್ಲ ರ್ಯಾಂಪೇಜ್‌ನ ಕ್ಯಾಮೆರಾ ಪರ್ಸನ್ ಎಂದು ಗುರುತಿಸಲಾಗಿದೆ. ಈ ದಾಳಿಯಲ್ಲಿ ಇವರಿಗೆ ತೀವ್ರ ಗಾಯಗಳಾಗಿದ್ದು, ಅವರ ಕ್ಯಾಮೆರಾ ಮತ್ತು ಇತರ ಉಪಕರಣಗಳನ್ನು ಧ್ವಂಸ ಮಾಡಲಾಗಿದೆ.

ಬಾಸ್ ಕನ್ನಡ ರಿಯಾಲಿಟಿ ಶೋನ ಸ್ಪರ್ಧಿ ರಜತ್ ಅವರು ಸೌಜನ್ಯ ಅವರ ಮನೆಗೆ ಭೇಟಿ ನೀಡಿದ್ದ ಸಂದರ್ಭದಲ್ಲಿ, ಅವರನ್ನು ಸಂದರ್ಶನ ಮಾಡಲು ಈ ಯೂಟ್ಯೂಬರ್‌ಗಳು ತೆರಳಿದ್ದರು. ಸೌಜನ್ಯ ಅವರ ಮನೆಯ ಪಾಂಗಳ ಕ್ರಾಸ್ ಸಮೀಪ ಈ ಸಂದರ್ಶನ ನಡೆಯುತ್ತಿದ್ದಾಗ, ಸುಮಾರು 50 ರಿಂದ 100 ಜನರ ದೊಡ್ಡ ಗುಂಪು ಇವರ ಮೇಲೆ ಹಠಾತ್ ದಾಳಿ ನಡೆಸಿದೆ ಎಂದು ವರದಿಯಾಗಿದೆ. ದಾಳಿ ನಡೆಸಿದವರು "ಧರ್ಮಸ್ಥಳದ ಹೆಸರು ಕೆಡಿಸುತ್ತಿದ್ದೀರಿ" ಎಂದು ಆರೋಪಿಸಿ, ಯೂಟ್ಯೂಬರ್‌ಗಳ ಮೇಲೆ ಹಲ್ಲೆ ಮಾಡಿದ್ದಾರೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ.

ದಾಳಿಯಲ್ಲಿ ಗಾಯಗೊಂಡ ಎಲ್ಲರನ್ನು ಉಜಿರೆಯ ಬೆನಕ ಆಸ್ಪತ್ರೆಗೆ ದಾಖಲಿಸಲಾಗಿದೆ. ಅವರಲ್ಲಿ ಒಬ್ಬರ ಸ್ಥಿತಿ ಚಿಂತಾಜನಕವಾಗಿದೆ ಎಂದು ತಿಳಿದು ಬಂದಿದೆ.ಅವರೊಂದಿಗೆ ಮಾತನಾಡಿದ ಹೋರಾಟಗಾರರ ಪ್ರಕಾರ, ಘಟನೆ ನಡೆದು ಅರ್ಧ ಗಂಟೆಯಷ್ಟೇ ಆಗಿದ್ದು, ತಕ್ಷಣವೇ ಉನ್ನತ ಮಟ್ಟದ ಅಧಿಕಾರಿಗಳು ಕಾರ್ಯಪ್ರವೃತ್ತರಾಗಿ ಗೂಂಡಾಗಳನ್ನು ಬಂಧಿಸಬೇಕೆಂದು ಆಗ್ರಹಿಸಿದ್ದಾರೆ.

ಘಟನೆಯ ಬಗ್ಗೆ ಮಾಹಿತಿ ತಿಳಿದ ಕೂಡಲೇ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ. ಈ ಘಟನೆಯನ್ನು ಕರ್ನಾಟಕದ ಡಿಜಿಟಲ್ ಮಾಧ್ಯಮಗಳ ವೇದಿಕೆಯಾದ ಡಿಜಿಟಲ್ ಮೀಡಿಯಾ ಫಾರ್ ಡೆಮಾಕ್ರಸಿ ಖಂಡಿಸಿದ್ದು, ತಪ್ಪಿತಸ್ಥರ ವಿರುದ್ಧ ತಕ್ಷಣ ಕ್ರಮ ತೆಗೆದುಕೊಳ್ಳುವಂತೆ ಸರ್ಕಾರವನ್ನು ಒತ್ತಾಯಿಸಿದೆ.

ಈ ಘಟನೆಯು ಕರ್ನಾಟಕದಲ್ಲಿ ಪತ್ರಿಕಾ ಸ್ವಾತಂತ್ರ್ಯ ಮತ್ತು ಅಭಿವ್ಯಕ್ತಿ ಸ್ವಾತಂತ್ರ್ಯದ ಮೇಲೆ ದಾಳಿಯಾಗಿದೆ ಎಂದು ವ್ಯಾಪಕವಾಗಿ ಖಂಡಿಸಲಾಗುತ್ತಿದೆ

# ರಸಗೊಬ್ಬರ ಕೊರತೆ ಆಗದಂತೆ ನೋಡಿಕೊಳ್ಳಿ: ಸಚಿವ ಮುನಿಯಪ್ಪ



ಬೆಂಗಳೂರು ಗ್ರಾಮಾಂತರ: ಜಿಲ್ಲೆಯಾದ್ಯಂತ ಉತ್ತಮ ಮಳೆ ಆಗುತ್ತಿದ್ದು ರೈತರು ಬಿತ್ತನೆ ಕಾರ್ಯದಲ್ಲಿ ತೊಡಗಿಕೊಂಡಿದ್ದಾರೆ ಈ ಸಂದರ್ಭದಲ್ಲಿ ಕೃಷಿ ಚಟುವಟಿಕೆಗಳಿಗೆ ರಸಗೊಬ್ಬರಗಳ ಕೊರತೆ ಉಂಟಾಗದಂತೆ ನೋಡಿಕೊಳ್ಳಿ ಎಂದು ಕೃಷಿ ಅಧಿಕಾರಿಗಳಿಗೆ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಹೆಚ್ ಮುನಿಯಪ್ಪ ಅವರು ಹೇಳಿದರು. ದೇವನಹಳ್ಳಿ ತಾಲ್ಲೂಕಿನ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ 3ನೇ ತಾಲ್ಲೂಕು ಮಟ್ಟದ ತ್ರೈಮಾಸಿಕ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ತಾಲ್ಲೂಕಿನಲ್ಲಿ ವಾರ್ಷಿಕ 804 ಮಿ.ಮೀ ಮಳೆ ಅಂದಾಜಿಸಲಾಗಿದ್ದು, ಪ್ರಸ್ತುತ 383 ಮಿ.ಮೀ ಮಳೆ ಆಗಿದೆ. ಮಳೆಯಾಶ್ರಿತ ಬೆಳೆಗಳಾದ ರಾಗಿ, ಹುರುಳಿ, ತೊಗರಿ ಇನ್ನಿತರ ಬೆಳೆಗಳು 12,270 ಹೆಕ್ಟೇರ್‌ನಷ್ಟು ಅಂದರೆ ಶೇಕಡ 90% ಬಿತ್ತನೆ ಕಾರ್ಯ ಪೂರ್ಣಗೊಂಡಿದೆ ಎಂದು ಕೃಷಿ ಅಧಿಕಾರಿಗಳು ತಿಳಿಸಿದ್ದಾರೆ. ಯೂರಿಯಾ, ಡಿಎಪಿ ಗೊಬ್ಬರಕ್ಕೆ ಹೆಚ್ಚು ಬೇಡಿಕೆ ಇದೆ. ರಸಗೊಬ್ಬರ ದಾಸ್ತಾನು ಅಂಗಡಿ ಮಳಿಗೆಗಳಿಗೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿ.

ಜುಲೈ ಮಾಹೆಯ ಅಂತ್ಯದಿಂದ ಆಗಸ್ಟ್ ಮಾಹೆಯಲ್ಲಿ ಬಿತ್ತನೆ ಕಾರ್ಯಗಳು ಗರಿಗೆದರುತ್ತವೆ. ರೈತರಿಗೆ ಸಮರ್ಪಕ ಬಿತ್ತನೆ ಬೀಜ, ರಸಗೊಬ್ಬರ ಸಿಗಬೇಕು. ಯಾವ ರೈತನು ಕೂಡ ಅಂಗಡಿ, ಮಳಿಗೆಗಳ ಮುಂದೆ ಸರತಿ ಸಾಲಿನಲ್ಲಿ ನಿಲ್ಲಬಾರದು. ರೈತರಿಗೆ ರಸಗೊಬ್ಬರ ಸಿಗಲಿಲ್ಲ ಎಂದು ದೂರು ಬರಬಾರದು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಕೃಷಿ, ತೋಟಗಾರಿಕೆ ಬೆಳೆಗಳಿಗೆ ವಿಮೆ ಮಾಡಿಸಲು ರೈತರಿಗೆ ಅರಿವು ಮೂಡಿಸಿ, ಪ್ರಕೃತಿ ವಿಕೋಪಗಳಿಂದ ಸಂಭವಿಸುವ ಬೆಳೆ ನಷ್ಟಕ್ಕೆ ವಿಮೆ ಪರಿಹಾರ ಸಿಗಲಿದೆ. ವಿಮೆ ಪರಿಹಾರದಿಂದ ರೈತರಿಗೆ ಅಲ್ಪ ಪ್ರಮಾಣದ ಆರ್ಥಿಕ ಹೊರೆ ತಗ್ಗಲಿದೆ. ಹಾಗೇಯೇ ತಮ್ಮ ಇಲಾಖೆಗಳಲ್ಲಿ ಸಿಗುವ ಸರ್ಕಾರದ ಯೋಜನೆಗಳ ಬಗ್ಗೆ ಪ್ರತಿ ರೈತರಿಗೆ ಕರಪತ್ರಗಳನ್ನು ಹಂಚಿ ಪ್ರಚಾರ ನೀಡಿ ಎಂದರು.

ಬೂದಿಗೆರೆ ಕುಡಿಯುವ ನೀರು ಸಮಸ್ಯೆ ನಿವಾರಿಸಲು ಒಂದು ತಿಂಗಳ ಗಡುವು:

ಬೂದಿಗೆರೆ ಸುಮಾರು 2500 ರಿಂದ 3000 ಮನೆಗಳಿರುವ ಪಟ್ಟಣ. ಅಂತಹ ಪಟ್ಟಣಕ್ಕೆ ಸಮರ್ಪಕವಾಗಿ ನೀರು ಕೊಡಲಿಲ್ಲ ಎಂದರೆ ಏನರ್ಥ. ಅಲ್ಲಿ ಉಂಟಾಗಿರುವ ಕುಡಿಯುವ ನೀರು ಸಮಸ್ಯೆ ಬಗೆಹರಿಸಲು ತಕ್ಷಣ 2 ಕೊಳವೆ ಬಾವಿ ಕೊರೆಸಿ, ಸುಮಾರು 8 ಲಕ್ಷ ಸಾಮರ್ಥ್ಯದ ಓವರ್ ಹೆಡ್ ಟ್ಯಾಂಕ್ ಗಳ ನೀರು ಸರಬರಾಜು ಆಗಲು ಒಂದೇ ಪೈಪ್ಲೈನ್ ವ್ಯವಸ್ಥೆ ಇದ್ದು ಎಲ್ಲಾ ಓವರ್ ಹೆಡ್ ಟ್ಯಾಂಕ್ ಗಳಿಗೆ ಸಿಂಗಲ್ ಪೈಪ್ಲೈನ್ ಅಳವಡಿಸಿ ನೀರು ಸರಬರಾಜು ಮಾಡಿ. ಈ ಕೆಲಸ ಒಂದು ತಿಂಗಳ ಒಳಗಾಗಿ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಗಡುವು ನೀಡಿದರು.

ತಾಲ್ಲೂಕಿನಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿ ಬರುವ ಬಾಬು ಜಗಜೀವನರಾಂ, ಡಾ.ಬಿ.ಆರ್ ಅಂಬೇಡ್ಕರ್ ಭವನಗಳು ಎಂಟು ಇದ್ದು, 6 ಭವನಗಳು ಪೂರ್ಣ ಗೊಂಡಿದೆ. ಕೆಲವು ಭವನಗಳಲ್ಲಿ ಕಾಮಗಾರಿಗಳು ಅಪೂರ್ಣವಾಗಿ ಹಾಗೇ ಉಳಿದಿದೆ. ಅನುದಾನ ಬಿಡುಗಡೆ ಆಗಿರುವ ಭವನಗಳನ್ನು ಮೂರು ತಿಂಗಳಲ್ಲಿ ಪೂರ್ಣಗೊಳಿಸಿ ಎಂದು ಹೇಳಿದರು.

ವಿಜಯಪುರ ಹೋಬಳಿಯ ಧರ್ಮಪುರ ಗ್ರಾಮದಲ್ಲಿ ಅರಣ್ಯ ಇಲಾಖೆ ಭೂ ಒತ್ತುವರಿಯಿಂದ ರೈತರಿಗೆ ಬಹಳಷ್ಟು ತೊಂದರೆ ಆಗಿದೆ. ಆ ಭಾಗದಲ್ಲಿ ರೈತರು ನೂರಾರು ವರ್ಷಗಳಿಂದ ಕೃಷಿ ಚಟುವಟಿಕೆಗಳಲ್ಲಿ ತೊಡಗಿದ್ದಾರೆ. ಸಾಗುವಳಿ ಚೀಟಿ ಕೂಡ ವಿತರಿಸಲಾಗಿದೆ. ಆದರೆ ಏಕಾಏಕಿ ಅರಣ್ಯ ಇಲಾಖೆ ಭೂಮಿ ಎಂದು ಗಿಡ ನೆಡಲು ಬಂದಿದ್ದು ತಕ್ಷಣವೇ ಇದನ್ನು ನಿಲ್ಲಿಸಲಾಗಿದೆ. ತಹಶೀಲ್ದಾರ್, ಸರ್ವೇ ಇಲಾಖೆ, ಅರಣ್ಯ ಇಲಾಖೆ, ಪೊಲೀಸ್ ಇಲಾಖೆಯವರು ಧರ್ಮಪುರಕ್ಕೆ ಜಂಟಿ ಭೇಟಿ ನೀಡಿ ರೈತರ ಜಮೀನುಗಳಿಗೆ ಮೊದಲು ಹದ್ದುಬಸ್ತು ಮಾಡಿ ಎಂದರು. ಸರ್ಕಾರದ ಹಂತದಲ್ಲಿ ಈ ವಿಷಯ ಕುರಿತು ಚರ್ಚಿಸಲಾಗುವುದು ಎಂದರು.

ಪೋಡಿ ಮುಕ್ತ ತಾಲ್ಲೂಕು, ನಿವೇಶನ ಹಂಚಿಕೆ, ವಸತಿ ಹಂಚಿಕೆ, ಗ್ರಾಮಗಳಲ್ಲಿ ಸ್ಮಶಾನ ಹಂಚಿಕೆಗೆ ಅಗತ್ಯ ಕ್ರಮ ವಹಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು. ಎಸ್ಸೆಸ್ಸೆಲ್ಸಿಯಲ್ಲಿ ಈ ಬಾರಿ ಉತ್ತಮ ಫಲಿತಾಂಶ ಬರಲು ಕ್ರಮ ವಹಿಸಿ ಎಂದರಲ್ಲದೆ, ವಿದ್ಯಾರ್ಥಿ ನಿಲಯಗಳಲ್ಲಿ ಗುಣಮಟ್ಟದ ಮೂಲಭೂತ ಸೌಕರ್ಯಗಳೊಂದಿಗೆ ಗುಣಮಟ್ಟದ ವಿದ್ಯಾಭ್ಯಾಸಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡಿ ಎಂದರು. ಸಭೆಯಲ್ಲಿ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ತಾಲ್ಲೂಕು ಅಧ್ಯಕ್ಷರಾದ ಜಗನ್ನಾಥ, ತಹಶೀಲ್ದಾರ್ ಅನಿಲ್ ಎಂ, ಇಓ ಶ್ರೀನಾಥ್ ಗೌಡ, ಸಚಿವರ ಆಪ್ತ ಕಾರ್ಯದರ್ಶಿ ನಟರಾಜ್ ಸೇರಿದಂತೆ ತಾಲ್ಲೂಕು ಮಟ್ಟದ ಅಧಿಕಾರಿಗಳು, ಕೆಡಿಪಿ ನಾಮನಿರ್ದೇಶಿತ ಸದಸ್ಯರು ಉಪಸ್ಥಿತರಿದ್ದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.